ದಿನಾಂಕಃ **16.09.2025** ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು**.**

ಪಾಟೀ ಸವಾಲುಃ ಶ್ರೀ ವೈ ಟಿ ಎಂ ವಕೀಲರಿಂದಃ-

ನಿಮಗೆ ಈ ಪ್ರಕರಣದ ಬಗ್ಗೆ ಏನು ಗೊತ್ತು ಎಂಬ ಪ್ರಶ್ನೆಗೆ ಸಾಕ್ಷಿ ಏನೂ ಗೊತ್ತಿಲ್ಲ ಎಂದು ನುಡಿದು ಮುಂದುವರೆದು ಆ ಸಮಯದಲ್ಲಿ ನಾನು ಅಂಗಡಿ ಒಳಗಡೆ ಇದ್ದೆ ಎಂದು ನುಡಿಯುತ್ತಾರೆ. ಅಪಘಾತ ಯಾವ ಸಮಯದಲ್ಲಿ ಆಯಿತು ಎಂದು ನಿಮಗೆ ಹೇಳಲಾಗುವುದಿಲ್ಲ ಎಂದರೆ ಸಾಕ್ಷಿ ಸಂಜೆ ಸಮಯದಲ್ಲಿ ಆಗಿರುತ್ತದೆ ಎಂದು ನುಡಿಯುತ್ತಾರೆ. ಆರೋಪಿಯನ್ನು ನಾನು ನೋಡಿರುವುದಿಲ್ಲ. ಮೃತ ವ್ಯಕ್ತಿಯನ್ನು ನಾನು ಆಸ್ಪತ್ರೆಗೆ ಸೇರಿಸಿಲ್ಲ ಎಂದರೆ ಸರಿ. ಮೃತ ವ್ಯಕ್ತಿಯನ್ನು ಎಲ್ಲಿಗೆ ಕರೆದುಕೊಂಡು ಹೋಗಿರುತ್ತಾರೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಅಪಘಾತ ಹೇಗೆ ಆಯಿತು ಎಂದು ನಾನು ನೋಡಿಲ್ಲ ಎಂದರೆ ಸರಿ.

ಮರು ವಿಚಾರಣೆಃ ಇರುವುದಿಲ್ಲ**.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದಃನ್ಯಾಃದಂ.,ರವರು, ಕಡೂರು.